ಕರ್ನಾಟಕ ಸರ್ಕಾರ

**ಸಂಖ್ಯೆ:** ಸಕಇ 8 ಎಸ್‌ಎಲ್ ಪಿ 2024 (ಭಾಗ-5)

ಕರ್ನಾಟಕ ಸರ್ಕಾರ ಸಚಿವಾಲಯ
ವಿಕಾಸಸೌಧ, ಡಾ: ಬಿ.ಆರ್. ಅಂಬೇಡ್ಕರ್ ವೀಧಿ
ಬೆಂಗಳೂರು, ದಿನಾಂಕ: 08-10-2025

**ಸುತ್ತೋಲೆ**

**ವಿಷಯ:** ಪರಿಶಿಷ್ಟ ಜಾತಿಗಳಲ್ಲಿ ಒಳ ಮೀಸಲಾತಿ ಆದೇಶವಾಗಿರುವ ಹಿನ್ನೆಲೆಯಲ್ಲಿ ಆದಿ ಆಂಧ್ರ, ಆದಿ ದ್ರಾವಿಡ ಮತ್ತು ಆದಿ ಕರ್ನಾಟಕ ಮತ್ತು ಇತರೆ ಸಮುದಾಯಗಳಿಗೆ ಜಾತಿ ಪ್ರಮಾಣ ಪತ್ರಗಳನ್ನು ನೀಡುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಆದೇಶ ಸಂಖ್ಯೆ: ಸಕಇ 8 ಎಸ್‌ಎಲ್‌ಪಿ 2024, ದಿನಾಂಕ: 25-08-2025

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿ ಪಟ್ಟಿಯಲ್ಲಿನ 101 ಜಾತಿಗಳನ್ನು ಒಳ ಮೀಸಲಾತಿಗಾಗಿ ಸಂವಿಧಾನದ ಅನುಚ್ಛೇಧ 15 ಮತ್ತು ಅನುಚ್ಛೇಧ 16 ರನ್ವಯ ಶಿಕ್ಷಣ ಮತ್ತು ಉದ್ಯೋಗದಲ್ಲಿ ಮೀಸಲಾತಿ ಕಲ್ಪಿಸಲು ಪ್ರವರ್ಗ- ಎ ರಲ್ಲಿ 16 ಜಾತಿಗಳು ಪ್ರವರ್ಗ-ಬಿ ರಲ್ಲಿ 19 ಜಾತಿಗಳು ಮತ್ತು ಪ್ರವರ್ಗ-ಸಿ ರಲ್ಲಿ 63 ಜಾತಿಗಳನ್ನು ಸೇರಿಸಿ, ಮೂರು ಪ್ರವರ್ಗಗಳಾಗಿ ವರ್ಗೀಕರಿಸಿ, ಆದೇಶ ಹೊರಡಿಸಲಾಗಿದೆ. ಮುಂದುವರೆದು, ಆದಿ ಆಂಧ್ರ, ಆದಿ ದ್ರಾವಿಡ ಮತ್ತು ಆದಿ ಕರ್ನಾಟಕ ಸಮುದಾಯಗಳನ್ನು ಪ್ರವರ್ಗ- ಎ ಮತ್ತು ಪ್ರವರ್ಗ – ಬಿ ನಲ್ಲಿ ಮೀಸಲಾತಿ ಸೌಲಭ್ಯವನ್ನು ಪಡೆಯಬಹುದೆಂದು ಆದೇಶಿಸಲಾಗಿದೆ.

ಮೇಲ್ಕಂಡ ಆದೇಶವನ್ನು ಅನುಷ್ಠಾನಗೊಳಿಸಲು ಕೆಲವೊಂದು ಸ್ಪಷ್ಟೀಕರಣ ನೀಡುವುದು ಅಗತ್ಯವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಪರಿಶಿಷ್ಟ ಜಾತಿ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರ ಪಡೆಯುವ ಬಗ್ಗೆ ಈ ಕೆಳಕಂಡಂತೆ ವಿವರಿಸಲಾಗಿದೆ.

## A) ಪರಿಶಿಷ್ಟ ಜಾತಿ ಪ್ರಮಾಣ ಪತ್ರ ಈಗಾಗಲೇ ಪಡೆದಿದ್ದಲ್ಲಿ ಅನುಸರಿಸಬೇಕಾದ ವಿಧಾನ:

1) ಆದಿ ಆಂಧ್ರ, ಆದಿ ದ್ರಾವಿಡ ಮತ್ತು ಆದಿ ಕರ್ನಾಟಕ ಸಮುದಾಯಗಳನ್ನು ಹೊರತುಪಡಿಸಿ ಉಳಿದ 98 ಜಾತಿಗಳನ್ನು ಪ್ರವರ್ಗ- ಎ, ಪ್ರವರ್ಗ-ಬಿ ಮತ್ತು ಪ್ರವರ್ಗ –ಸಿ ಗಳಲ್ಲಿ ವರ್ಗೀಕರಿಸಲಾಗಿದೆ. ಆದರೆ, ಸದರಿ 98 ಸಮುದಾಯದವರು ಈಗಾಗಲೇ ಜಾತಿ ಪ್ರಮಾಣ ಪತ್ರಗಳನ್ನು ಪಡೆದಿರುತ್ತಾರೆ. ಈ 98 ಜಾತಿಗಳು ತಮ್ಮ ಜಾತಿಯನ್ನು ಸ್ಪಷ್ಟವಾಗಿ ತಿಳಿಸಿ, ಪರಿಶಿಷ್ಟ ಜಾತಿ ಪ್ರಮಾಣ ಪತ್ರ ಪಡೆದಿರುವುದರಿಂದ ಅದೇ ಜಾತಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರವರ್ಗದೊಂದಿಗೆ ಮೀಸಲಾತಿ ಸೌಲಭ್ಯ ಪಡೆಯಲು ಉಪಯೋಗಿಸಬಹುದಾಗಿದೆ. ಆದ್ದರಿಂದ ಸಂಬಂಧಪಟ್ಟ ಪ್ರಾಧಿಕಾರಿಗಳು ಈ ಜಾತಿ ಪ್ರಮಾಣ ಪತ್ರಗಳಿಗೆ ಉಲ್ಲೇಖ(1) ರ ಆದೇಶದಲ್ಲಿ ವರ್ಗೀಕರಿಸಿರುವಂತೆ ಆಯಾ ಜಾತಿಗಳಿಗೆ ಸಂಬಂಧಿಸಿದ ಪ್ರವರ್ಗವನ್ನು ಅಟಲ್ ಜೀ ಜನಸ್ನೇಹಿ ಕೇಂದ್ರದ ತಂತ್ರಾಂಶದಲ್ಲಿ

S.V
08/10/2025

ಅಳವಡಿಸಿಕೊಂಡು ಜಾತಿ ಪ್ರಮಾಣ ಪತ್ರದಲ್ಲಿ ನಮೂದಿಸುವ ಬಗ್ಗೆ ಅಗತ್ಯ ಕ್ರಮವಹಿಸುವುದು.

**ಉದಾಹರಣೆ i) :** ಅಭ್ಯರ್ಥಿಯು ಕೊರಚ (Koracha) ಎಂದು ಜಾತಿ ಪ್ರಮಾಣ ಪತ್ರ ಈಗಾಗಲೇ ಪಡೆದಿದ್ದು.ಅಟಲ್ ಜೀ ಜನಸ್ನೇಹಿ ಕೇಂದ್ರದವರು ಉಲ್ಲೇಖ(1)ರಲ್ಲಿನ ಆದೇಶದಂತೆ ಕೊರಚ ಸಮುದಾಯವನ್ನು ಪ್ರವರ್ಗ–ಸಿ ಯಲ್ಲಿ ವರ್ಗೀಕರಿಸಿರುವುದರಿಂದ ಜಾತಿ ಪ್ರಮಾಣ ಪತ್ರವನ್ನು **ಕೊರಚ (ಪ್ರವರ್ಗ-ಸಿ)** ಎಂದು ನೀಡಲು ತಂತ್ರಾಂಶದಲ್ಲಿ ಅಳವಡಿಸುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವುದು.

**ಉದಾಹರಣೆ ii) :** ಅಭ್ಯರ್ಥಿಯು ಪರೆಯನ್, ಪರೆಯ ಎಂದು ಜಾತಿ ಪ್ರಮಾಣ ಪತ್ರ ಈಗಾಗಲೇ ಪಡೆದಿದ್ದು.ಅಟಲ್ ಜೀ ಜನಸ್ನೇಹಿ ಕೇಂದ್ರದವರು ಉಲ್ಲೇಖ(1)ರಲ್ಲಿನ ಆದೇಶದಂತೆ ಪರೆಯನ್, ಪರೆಯ ಸಮುದಾಯವನ್ನು ಪ್ರವರ್ಗ– ಬಿ ಯಲ್ಲಿ ವರ್ಗೀಕರಿಸಿರುವುದರಿಂದ ಜಾತಿ ಪ್ರಮಾಣ ಪತ್ರವನ್ನು **ಪರೆಯನ್, ಪರೆಯ (ಪ್ರವರ್ಗ-ಸಿ)** ಎಂದು ನೀಡಲು ತಂತ್ರಾಂಶದಲ್ಲಿ ಅಳವಡಿಸುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವುದು.

2) ಈಗಾಗಲೇ ಆದಿ ಆಂಧ್ರ, ಆದಿ ದ್ರಾವಿಡ ಮತ್ತು ಆದಿ ಕರ್ನಾಟಕ ಎಂದು ಜಾತಿ ಪ್ರಮಾಣ ಪತ್ರ ಪಡೆದವರು, ಸಂಬಂಧಿಸಿದ ಪ್ರವರ್ಗ ಎ ಅಥವಾ ಪ್ರವರ್ಗ-ಬಿ ರಲ್ಲಿ ಮೀಸಲಾತಿ ಸೌಲಭ್ಯ ಪಡೆಯಬೇಕಾದಲ್ಲಿ ತಮ್ಮ ಮೂಲ ಜಾತಿ ಹಾಗೂ ಪ್ರವರ್ಗವನ್ನು ಉಲ್ಲೇಖ(1)ರ ಆದೇಶದಂತೆ ಸ್ಪಷ್ಟವಾಗಿ ನಮೂದಿಸಿ, **ಅರ್ಜಿ ನಮೂನೆ -1** ರಲ್ಲಿ ಪ್ರಸ್ತುತ ಜಾರಿಯಲ್ಲಿರುವ ಪದ್ಧತಿಯಂತೆ ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸುವುದು.

3) ಅರ್ಜಿ ಸ್ವೀಕರಿಸಿದ ಪ್ರಾಧಿಕಾರಗಳು ಕರ್ನಾಟಕ ಅನುಸೂಚಿತ ಜಾತಿಗಳು ಅನುಸೂಚಿತ ಬುಡಕಟ್ಟುಗಳು ಮತ್ತು ಇತರೆ ಹಿಂದುಳಿದ ವರ್ಗಗಳ (ನೇಮಕಾತಿ, ಮುಂತಾದುವುಗಳ ಮೀಸಲಾತಿ) ಅಧಿನಿಯಮ 1990 ತಿದ್ದುಪಡಿ ಅಧಿನಿಯಮ 2024 ಮತ್ತು ನಿಯಮಗಳು 1992, ಮತ್ತು ಸರ್ಕಾರದ ಸುತ್ತೋಲೆ ಸಂಖ್ಯೆ: ಸಕಇ 41 ಎಸ್ಎಡಿ 2022, ದಿನಾಂಕ: 02-07-2022ರನ್ವಯ ಪರಿಶೀಲಿಸಿ, ಅಭ್ಯರ್ಥಿಗಳ ಮೂಲ ಜಾತಿಯ ಬಗ್ಗೆ ಸ್ಥಳೀಯ ವಿಚಾರಣೆ ನಡೆಸಿ, ಮೂಲ ಜಾತಿಯನ್ನು ಖಾತರಿಪಡಿಸಿಕೊಂಡು ಉಲ್ಲೇಖ(1)ರಲ್ಲಿ ವರ್ಗೀಕರಿಸಿರುವಂತೆ ಮೂಲ ಜಾತಿಯೊಂದಿಗೆ ಪ್ರವರ್ಗವನ್ನು ನಮೂದಿಸಿ, ಜಾತಿ ಪ್ರಮಾಣ ಪತ್ರವನ್ನು ನೀಡುವುದು.

**ಉದಾಹರಣೆ: i)** ಅಭ್ಯರ್ಥಿಯು ಆದಿ ಕರ್ನಾಟಕ ಎಂದು ಜಾತಿ ಪ್ರಮಾಣ ಪತ್ರ ಪಡೆದಿದ್ದು ಹಾಗೂ ಮೂಲ ಜಾತಿಯು **ಹೊಲೆಯ** ಎಂದು ಇದ್ದಲ್ಲಿ ಜಾತಿ ಪ್ರಮಾಣ ಪತ್ರದಲ್ಲಿ **ಆದಿ ಕರ್ನಾಟಕ (ಹೊಲೆಯ/ಪ್ರವರ್ಗ-ಬಿ)** ಎಂದು ನಮೂದಿಸಿ, ಜಾತಿ ಪ್ರಮಾಣ ಪತ್ರ ನೀಡುವುದು.

**ii)** ಅಭ್ಯರ್ಥಿಯು ಆದಿ ಕರ್ನಾಟಕ ಎಂದು ಜಾತಿ ಪ್ರಮಾಣ ಪತ್ರ ಪಡೆದಿದ್ದು ಹಾಗೂ ಮೂಲ ಜಾತಿಯು **ಮಾದಿಗ** ಎಂದು ಇದ್ದಲ್ಲಿ ಜಾತಿ ಪ್ರಮಾಣ ಪತ್ರದಲ್ಲಿ **ಆದಿ ಕರ್ನಾಟಕ (ಮಾದಿಗ/ಪ್ರವರ್ಗ- ಎ)** ಎಂದು ನಮೂದಿಸಿ, ಜಾತಿ ಪ್ರಮಾಣ ಪತ್ರ ನೀಡುವುದು.

S.V
08/10/2025

***ಉದಾಹರಣೆ (1) ಮತ್ತು (2) ರಂತೆ ಆದಿ ದ್ರಾವಿಡ ಮತ್ತು ಆದಿ ಆಂಧ್ರ ಅಭ್ಯರ್ಥಿಗಳು ಇದೇ ರೀತಿ ಜಾತಿ ಪ್ರಮಾಣ ಪತ್ರ ನೀಡಲು ಕ್ರಮವಹಿಸುವುದು.***

***ಸದರಿ ಪ್ರಕ್ರಿಯೆಯು ಆದಿ ದ್ರಾವಿಡ, ಆದಿ ಆಂಧ್ರ ಮತ್ತು ಆದಿ ಕರ್ನಾಟಕ ಎಂದು ಜಾತಿ ಪ್ರಮಾಣ ಪತ್ರ ಪಡೆದವರಿಗೆ ಮಾತ್ರ ಅನ್ವಯಿಸುತ್ತದೆ.***

4) ಆದಿ ಆಂಧ್ರ, ಆದಿ ದ್ರಾವಿಡ ಮತ್ತು ಆದಿ ಕರ್ನಾಟಕ್ಕೆ ಸೇರಿದ ಇತರೆ *(ಮೂಲ ಜಾತಿಯನ್ನು ತಿಳಿಸದೇ ಇರುವ)* ಅಭ್ಯರ್ಥಿಗಳು, ಉಲ್ಲೇಖ(1)ರ ಆದೇಶದಂತೆ, ಪ್ರವರ್ಗ- ಎ ಅಥವಾ ಪ್ರವರ್ಗ- ಬಿ ಯನ್ನು ಆಯ್ಕೆ ಮಾಡಿಕೊಂಡು ಸ್ಪಷ್ಟವಾಗಿ ನಮೂದಿಸಿ, ಮುಚ್ಚಳಿಕೆ ಪತ್ರ (Affidavit) ದೊಂದಿಗೆ ಅರ್ಜಿ ಸಲ್ಲಿಸುವುದು.

5) ಅರ್ಜಿ ಸ್ವೀಕರಿಸಿದ ಪ್ರಾಧಿಕಾರಗಳು ಕರ್ನಾಟಕ ಅನುಸೂಚಿತ ಜಾತಿಗಳು ಅನುಸೂಚಿತ ಬುಡಕಟ್ಟುಗಳು ಮತ್ತು ಇತರೆ ಹಿಂದುಳಿದ ವರ್ಗಗಳ (ನೇಮಕಾತಿ, ಮುಂತಾದುವುಗಳ ಮೀಸಲಾತಿ) ಅಧಿನಿಯಮ 1990 ತಿದ್ದುಪಡಿ ಅಧಿನಿಯಮ 2024 ಮತ್ತು ನಿಯಮಗಳು 1992, ಮತ್ತು ಸರ್ಕಾರದ ಸುತ್ತೋಲೆ ಸಂಖ್ಯೆ: ಸಕಇ 41 ಎಸ್ಎಡಿ 2022, ದಿನಾಂಕ: 02-07-2022ರನ್ವಯ ಪರಿಶೀಲಿಸಿ, ಅಭ್ಯರ್ಥಿಗಳೂ ಪರಿಶಿಷ್ಟ ಜಾತಿಗೆ ಸೇರಿರುವ ಬಗ್ಗೆ ಖಾತರಿಪಡಿಸಿಕೊಂಡು ಮೇಲ್ಕಂಡ ಕ್ರಮಸಂಖ್ಯೆ (4)ರಂತೆ, ನೀಡಿರುವ ಮುಚ್ಚಳಿಕೆ ಪತ್ರ (Affidavit)ನಲ್ಲಿ ಘೋಷಿಸಿರುವ ಪ್ರವರ್ಗವನ್ನು ನಮೂದಿಸಿ ಪರಿಶಿಷ್ಟ ಜಾತಿ ಪ್ರಮಾಣ ಪತ್ರವನ್ನು ನೀಡುವುದು.

**ಉದಾಹರಣೆ: 1)** ಅಭ್ಯರ್ಥಿಯು ಆದಿ ಕರ್ನಾಟಕ ಎಂದು ಜಾತಿ ಪ್ರಮಾಣ ಪತ್ರ ಪಡೆದಿದ್ದು ಅರ್ಜಿಯಲ್ಲಿ ಮೂಲ ಜಾತಿಯನ್ನು ತಿಳಿಸದೇ ಇದ್ದಲ್ಲಿ ಜಾತಿ ಪ್ರಮಾಣ ಪತ್ರದಲ್ಲಿ **ಆದಿ ಕರ್ನಾಟಕ (ಪ್ರವರ್ಗ-ಎ ಅಥವಾ ಪ್ರವರ್ಗ-ಬಿ)-*[ಅಭ್ಯರ್ಥಿಯು Affidavit ನಲ್ಲಿ ಘೋಷಿಸಿರುವಂತೆ]*** ನಮೂದಿಸಿ, ಜಾತಿ ಪ್ರಮಾಣ ಪತ್ರ ನೀಡುವುದು.

***ಆದಿ ದ್ರಾವಿಡ ಮತ್ತು ಆದಿ ಆಂಧ್ರ ಅಭ್ಯರ್ಥಿಗಳು ಇದೇ ರೀತಿ ಜಾತಿ ಪ್ರಮಾಣ ಪತ್ರ ನೀಡಲು ಕ್ರಮವಹಿಸುವುದು. ಸದರಿ ಪ್ರಕ್ರಿಯೆಯು ಆದಿ ದ್ರಾವಿಡ, ಆದಿ ಆಂಧ್ರ ಮತ್ತು ಆದಿ ಕರ್ನಾಟಕ ಎಂದು ಜಾತಿ ಪ್ರಮಾಣ ಪತ್ರ ಪಡೆದು ಮೂಲಜಾತಿಯನ್ನು ಅರ್ಜಿಯಲ್ಲಿ ತಿಳಿಸದೇ ಇರುವ ಅಭ್ಯರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ.***

**6)** ಅಭ್ಯರ್ಥಿಗಳು ಮೇಲಿನ ಕ್ರಮಸಂಖ್ಯೆ (4) ರಂತೆ ಆಯ್ಕೆ ಮಾಡಿಕೊಂಡು ಯಾವ ಪ್ರವರ್ಗದಲ್ಲಿ ಜಾತಿ ಪ್ರಮಾಣ ಪತ್ರ ಪಡೆದಿರುತ್ತಾರೆಯೋ ಅದೇ ಪ್ರವರ್ಗ ಅವರ ಕುಟುಂಬಕ್ಕೆ ಶಾಶ್ವತವಾಗಿ ಮುಂದುವರೆಯುತ್ತದೆ. ಯಾವುದೇ ಕಾರಣಕ್ಕೂ ಬದಲಾವಣೆಗೆ ಅವಕಾಶವಿರುವುದಿಲ್ಲ.

## B) ಪರಿಶಿಷ್ಟ ಜಾತಿ ಪ್ರಮಾಣ ಪತ್ರ ಪಡೆಯದೇ ಇದ್ದಲ್ಲಿ ಹೊಸದಾಗಿ ಪಡೆಯಲು ಅನುಸರಿಸಬೇಕಾದ ವಿಧಾನ:

1) ಆದಿ ಆಂಧ್ರ, ಆದಿ ದ್ರಾವಿಡ ಮತ್ತು ಆದಿ ಕರ್ನಾಟಕ ಜಾತಿಗಳನ್ನು ಹೊರತುಪಡಿಸಿ, ಉಳಿದ 98 ಜಾತಿಗಳನ್ನು ನಮೂದಿಸಿ, ಅರ್ಜಿ ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ಅರ್ಜಿ ಸ್ವೀಕರಿಸಿದ ಪ್ರಾಧಿಕಾರಗಳು ಕರ್ನಾಟಕ ಅನುಸೂಚಿತ ಜಾತಿಗಳು ಅನುಸೂಚಿತ ಬುಡಕಟ್ಟುಗಳು ಮತ್ತು ಇತರೆ ಹಿಂದುಳಿದ ವರ್ಗಗಳ (ನೇಮಕಾತಿ, ಮುಂತಾದುವುಗಳ ಮೀಸಲಾತಿ) ಅಧಿನಿಯಮ

J.V
08/10/2025

1990 ತಿದ್ದುಪಡಿ ಅಧಿನಿಯಮ 2024 ಮತ್ತು ನಿಯಮಗಳು 1992, ಮತ್ತು ಸರ್ಕಾರದ ಸುತ್ತೋಲೆ ಸಂಖ್ಯೆ: ಸಕಇ 41 ಎಸ್‌ಎಡಿ 2022, ದಿನಾಂಕ: 02-07-2022ರನ್ವಯ ಪರಿಶೀಲಿಸಿ, ಸಂಬಂಧಪಟ್ಟ ಪ್ರಾಧಿಕಾರಗಳು, ಅಭ್ಯರ್ಥಿಗಳ ಜಾತಿಯ ಬಗ್ಗೆ ಸ್ಥಳೀಯ ವಿಚಾರಣೆ ನಡೆಸಿ, ಜಾತಿಯನ್ನು ಖಾತರಿಪಡಿಸಿಕೊಂಡು ತಮ್ಮ ತಂದೆ-ತಾಯಿ/ಪಾಲಕರು ಜಾತಿ ಪ್ರಮಾಣ ಪತ್ರದಲ್ಲಿ ಅದೇ 98 ಜಾತಿಗಳಲ್ಲಿ ಪರಿಶಿಷ್ಟ ಜಾತಿ ಪ್ರಮಾಣ ಪತ್ರ ಪಡೆದಿದ್ದಲ್ಲಿ ಉಲ್ಲೇಖ(1)ರಲ್ಲಿ ವರ್ಗೀಕರಿಸಿರುವಂತೆ ಜಾತಿಯೊಂದಿಗೆ ಪ್ರವರ್ಗವನ್ನು ನಮೂದಿಸಿ, ಜಾತಿ ಪ್ರಮಾಣ ಪತ್ರವನ್ನು ನೀಡುವುದು.

**ಉದಾಹರಣೆ:** ಅಭ್ಯರ್ಥಿಯು ಮಾದಿಗ ಜಾತಿಗೆ ಸೇರಿರುವ ಬಗ್ಗೆ ಅರ್ಜಿ ಸಲ್ಲಿಸಿದ್ದಲ್ಲಿ ಸಕ್ಷಮ ಪ್ರಾಧಿಕಾರವು ಮೇಲಿನ ಕಾರ್ಯ್ವಯಂತೆ ಪರಿಶೀಲಿಸಿ, ಜಾತಿ ಪ್ರಮಾಣ ಪತ್ರದಲ್ಲಿ **ಮಾದಿಗ (ಪ್ರವರ್ಗ- ಎ)** ಎಂದು ಜಾತಿ ಪ್ರಮಾಣ ಪತ್ರ ನೀಡುವುದು.

2) ಅಭ್ಯರ್ಥಿಯ ತಮ್ಮ ಮೂಲ ಜಾತಿಯನ್ನು ಘೋಷಿಸಿ ಅರ್ಜಿ ಸಲ್ಲಿಸಿರುತ್ತಾರೆ. ಆದರೆ, ಅಭ್ಯರ್ಥಿಯ ತಂದೆ-ತಾಯಿ/ಪಾಲಕರ ದಾಖಲೆಗಳಲ್ಲಿ ಆದಿ ಆಂಧ್ರ, ಆದಿ ದ್ರಾವಿಡ ಮತ್ತು ಆದಿ ಕರ್ನಾಟಕ ಜಾತಿಯೆಂದು ನಮೂದಾಗಿರುವಂತಹ ಪ್ರಕರಣಗಳಲ್ಲಿ ಸಕ್ಷಮ ಪ್ರಾಧಿಕಾರವು ಕರ್ನಾಟಕ ಅನುಸೂಚಿತ ಜಾತಿಗಳು ಅನುಸೂಚಿತ ಬುಡಕಟ್ಟುಗಳು ಮತ್ತು ಇತರೆ ಹಿಂದುಳಿದ ವರ್ಗಗಳ (ನೇಮಕಾತಿ, ಮುಂತಾದುವುಗಳ ಮೀಸಲಾತಿ) ಅಧಿನಿಯಮ 1990 ತಿದ್ದುಪಡಿ ಅಧಿನಿಯಮ 2024 ಮತ್ತು ನಿಯಮಗಳು 1992, ಮತ್ತು ಸರ್ಕಾರದ ಸುತ್ತೋಲೆ ಸಂಖ್ಯೆ: ಸಕಇ 41 ಎಸ್‌ಎಡಿ 2022, ದಿನಾಂಕ: 02-07-2022ರನ್ವಯ ಪರಿಶೀಲಿಸಿ, ಸಂಬಂಧಪಟ್ಟ ಪ್ರಾಧಿಕಾರಗಳು, ಅಭ್ಯರ್ಥಿಗಳ ಜಾತಿಯ ಬಗ್ಗೆ ಸ್ಥಳೀಯ ವಿಚಾರಣೆ ನಡೆಸಿ, ಜಾತಿಯನ್ನು ಖಾತರಿಪಡಿಸಿಕೊಂಡು ಉಲ್ಲೇಖ(1)ರಲ್ಲಿ ವರ್ಗೀಕರಿಸಿರುವಂತೆ ಜಾತಿಯೊಂದಿಗೆ ಪ್ರವರ್ಗವನ್ನು ನಮೂದಿಸಿ, ಜಾತಿ ಪ್ರಮಾಣ ಪತ್ರವನ್ನು ನೀಡುವುದು.

**ಉದಾಹರಣೆ:** ಅಭ್ಯರ್ಥಿಯ ತಂದೆ-ತಾಯಿ/ಪಾಲಕರ ದಾಖಲೆಗಳಲ್ಲಿ ಆದಿ ಕರ್ನಾಟಕ ಎಂದು ಜಾತಿ ಪ್ರಮಾಣ ಪತ್ರ ಪಡೆದಿದ್ದು, ಅರ್ಜಿದಾರರು ತಮ್ಮ ಮೂಲ ಜಾತಿಯು **ಹೊಲೆಯ** ಎಂದು ಅರ್ಜಿ ಸಲ್ಲಿಸಿದ್ದಲ್ಲಿ ಜಾತಿ ಪ್ರಮಾಣ ಪತ್ರದಲ್ಲಿ **ಆದಿ ಕರ್ನಾಟಕ (ಹೊಲೆಯ/ಪ್ರವರ್ಗ-ಬಿ)** ಎಂದು ನಮೂದಿಸಿ, ಜಾತಿ ಪ್ರಮಾಣ ಪತ್ರ ನೀಡುವುದು.

3) ಆದಿ ಆಂಧ್ರ, ಆದಿ ದ್ರಾವಿಡ ಮತ್ತು ಆದಿ ಕರ್ನಾಟಕ್ಕೆ ಸೇರಿದ ಇತರೆ ಅಭ್ಯರ್ಥಿಗಳು (*ಮೂಲ ಜಾತಿಯನ್ನು ತಿಳಿಸದೇ ಇರುವ)* ಉಲ್ಲೇಖ(1)ರ ಆದೇಶದಂತೆ, ಪ್ರವರ್ಗ- ಎ ಅಥವಾ ಪ್ರವರ್ಗ- ಬಿ ಯನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ ಪ್ರವರ್ಗವನ್ನು ಸ್ಪಷ್ಟವಾಗಿ ನಮೂದಿಸಿ, ಮುಚ್ಚಳಿಕೆ ಪತ್ರ (Affidavit) ದೊಂದಿಗೆ ಹೊಸದಾಗಿ ಅರ್ಜಿಯನ್ನು ಸಲ್ಲಿಸಿದ್ದಲ್ಲಿ ಸಕ್ಷಮ ಪ್ರಾಧಿಕಾರವು ಅರ್ಜಿಯನ್ನು ಪರಿಶೀಲಿಸಿ, ತಮ್ಮ ತಂದೆ-ತಾಯಿ/ಪಾಲಕರ ದಾಖಲೆಗಳಲ್ಲಿ ಆದಿ ಆಂಧ್ರ, ಆದಿ ದ್ರಾವಿಡ ಮತ್ತು ಆದಿ ಕರ್ನಾಟಕ ಎಂದು ಜಾತಿ ಪ್ರಮಾಣ ಪತ್ರ ಪಡೆದಿದ್ದಲ್ಲಿ ಮೇಲ್ಕಂಡ ಕ್ರಮಸಂಖ್ಯೆ (A-5) ರಂತೆ ಹೊಸ ಜಾತಿ ಪ್ರಮಾಣ ಪತ್ರ ನೀಡುವ ಬಗ್ಗೆ ಅರ್ಜಿಗಳನ್ನು ಪರಿಶೀಲಿಸಿ, ಕ್ರಮವಹಿಸುವುದು.

S.V
08/10/2025

**ಉದಾಹರಣೆ:** ಅಭ್ಯರ್ಥಿಯು ಆದಿ ಕರ್ನಾಟಕ ಎಂದು ಜಾತಿ ಪ್ರಮಾಣ ಪತ್ರ ಪಡೆಯಲು ಹೊಸದಾಗಿ ಅರ್ಜಿ ಸಲ್ಲಿಸಿ, ಮೂಲ ಜಾತಿಯನ್ನು ತಿಳಿಸದೇ ಇದ್ದಲ್ಲಿ ಹಾಗೂ ತಮ್ಮ ತಂದೆ-ತಾಯಿ/ಪಾಲಕರ ದಾಖಲೆಗಳಲ್ಲಿ ಆದಿ ಕರ್ನಾಟಕ ಜಾತಿ ಪ್ರಮಾಣ ಪತ್ರ ಪಡೆದಿದ್ದು, ಜಾತಿ ಪ್ರಮಾಣ ಪತ್ರದಲ್ಲಿ **ಆದಿ ಕರ್ನಾಟಕ (ಪ್ರವರ್ಗ-ಎ ಅಥವಾ ಪ್ರವರ್ಗ-ಬಿ)-*[ಅಭ್ಯರ್ಥಿಯು Affidavit ನಲ್ಲಿ ಘೋಷಿಸಿರುವಂತೆ]*** ನಮೂದಿಸಿ, ಜಾತಿ ಪ್ರಮಾಣ ಪತ್ರವನ್ನು ನೀಡುವುದು. ಅಭ್ಯರ್ಥಿಗಳು ಮೇಲ್ಕಂಡ ಕ್ರಮಸಂಖ್ಯೆ (3) ರಂತೆ ಆಯ್ಕೆ ಮಾಡಿಕೊಂಡು ಯಾವ ಪ್ರವರ್ಗದಲ್ಲಿ ಜಾತಿ ಪ್ರಮಾಣ ಪತ್ರ ಪಡೆದಿರುತ್ತಾರೆಯೋ ಅದೇ ಪ್ರವರ್ಗ ಅವರ ಕುಟುಂಬಕ್ಕೆ ಶಾಶ್ವತವಾಗಿ ಮುಂದುವರೆಯುತ್ತದೆ. ಯಾವುದೇ ಕಾರಣಕ್ಕೂ ಬದಲಾವಣೆಗೆ ಅವಕಾಶವಿರುವುದಿಲ್ಲ.

ಆದಿ ದ್ರಾವಿಡ, ಆದಿ ಆಂಧ್ರ ಮತ್ತು ಆದಿ ಕರ್ನಾಟಕ ಈ ಮೂರು ಜಾತಿಗಳಿಗೆ ಮೂಲ ಜಾತಿಯನ್ನು ಸಂಬಂಧಪಟ್ಟ ಪ್ರವರ್ಗಗಳೊಂದಿಗೆ ಜಾತಿ ಪ್ರಮಾಣ ಪತ್ರದಲ್ಲಿ ನಮೂದಿಸುವುದು. ಆದರೆ, ಭಾರತ ಸರ್ಕಾರವು ಅಧಿಸೂಚಿಸಿರುವ ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಇಲ್ಲದೇ ಇರುವ ಯಾವುದೇ ಜಾತಿಗಳನ್ನು ಮೂಲ ಜಾತಿಯೆಂದು ನಮೂದಿಸತಕ್ಕದ್ದಲ್ಲ.

S.V 08/10/2025
(ಕಲಾವತಿ ಎಸ್.ವಿ.)
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ

**ಇವರಿಗೆ,**

1) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹು ಮಹಡಿ ಕಟ್ಟಡ, ಬೆಂಗಳೂರು.
2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬಹು ಮಹಡಿ ಕಟ್ಟಡ, ಬೆಂಗಳೂರು.
3) ಪೊಲೀಸ್ ಮಹಾನಿರ್ದೇಶಕರು, ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯ, ಬೆಂಗಳೂರು.
4) ಆಯುಕ್ತರು, ಕಂದಾಯ ಇಲಾಖೆ, ಬಹು ಮಹಡಿ ಕಟ್ಟಡ, ಬೆಂಗಳೂರು.
5) ನಿರ್ದೇಶಕರು, ಅಟಲ್ ಜೀ ಜನಸ್ನೇಹಿ ಕೇಂದ್ರ, ಬೆಂಗಳೂರು.
6) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ವಿಶೇಷಾಧಿಕಾರಿ, ಬೆಂಗಳೂರು.
7) ಎಲ್ಲಾ ಪ್ರಾದೇಶಿಕ ಆಯುಕ್ತರುಗಳು, ಕಲಬುರಗಿ, ಬೆಳಗಾವಿ, ಕಂದಾಯ
8) ಎಲ್ಲಾ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್
9) ಎಲ್ಲಾ ಉಪ ವಿಭಾಗಾಧಿಕಾರಿಗಳು/ಎಲ್ಲಾ ತಹಶೀಲ್ದಾರರು
10) ಎಲ್ಲಾ ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ.
11) ಕಛೇರಿ ರಕ್ಷಾ ಕಡತ.

**ಪ್ರತಿಯನ್ನು**

1) ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2) ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.